**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.**

**ಕ್ರಿ ಮೊ ಸಂಖ್ಯೆ 647/2021**

**ಪಿರ್ಯಾದಿ** : ರಾಜ್ಯದ ಪರವಾಗಿ ಲಕ್ಕವಳ್ಳಿ ಪೊಲೀಸರು

**- ವಿರುದ್ಧ -**

**ಆರೋಪಿ/ತರು** : ದಾದಾಪೀರ್ ಬಿನ್ ಟಿಪ್ಪುಸಾಬ್, 40 ವರ್ಷ, ವಾಸ : ಬಸಲೀಕಟ್ಟೆ, ಸಿದ್ದಾಪುರ, ಭದ್ರಾವತಿ ತಾಲ್ಲೂಕು

**-:ದೋಷಾರೋಪಣೆ:-**

ಶ್ರೀ ಶಿವಕುಮಾರ್.ಆರ್., ಬಿ.ಎ.ಎಲ್., ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ಆರೋಪಿಯಾದ ನಿಮ್ಮ ವಿರುದ್ಧ ಮಾಡುವ ದೋಷಾರೋಪಣೆ ಏನೆಂದರೆ:-

ದಿನಾಂಕ 23.10.2018 ರಂದು ಮಧ್ಯಾಹ್ನ 12.00 ಗಂಟೆ ಸಮಯದಲ್ಲಿ ಲಕ್ಕವಳ್ಳಿ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ರಂಗೇನಹಳ್ಳಿ ಗ್ರಾಮದ ಸಾಲೇಬೋರನಹಳ್ಳಿಯಲ್ಲಿ ಚಾಸಾ-1 ಶ್ರೀಮತಿ ವಿಜಯಲಕ್ಷ್ಮಿರವರು ಅವರ ಮನೆಗೆ ಬೀಗ ಹಾಕಿಕೊಂಡು ಕೆಲಸಕ್ಕೆ ಹೋಗಿದ್ದಾಗ, ಆರೋಪಿಯಾದ ನೀವು ಕಳ್ಳತನ ಮಾಡುವ ಉದ್ದೇಶದಿಂದ ಚಾಸಾ-1 ರವರು ಹಾಕಿದ್ದ ಮನೆಯ ಬೀಗವನ್ನು ಕಬ್ಬಿಣದ ರಾಡಿನಿಂದ ಮೀಟಿ ಸದರಿ ಮನೆಯೊಳಗೆ ಅಕ್ರಮವಾಗಿ ಪ್ರವೇಶಿಸಿದ್ದು, ಆದಕಾರಣ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 454 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ, ಆರೋಪಿಯಾದ ನೀವು ಚಾಸಾ-1 ರವರ ಮನೆಯ ಒಳಗೆ ಅಕ್ರಮವಾಗಿ ಪ್ರವೇಶಿಸಿ, ಚಾಸಾ-1 ರವರು ಮನೆಯ ಗಾಡ್ರೇಜ್ ನಲ್ಲಿಟ್ಟಿದ್ದ 3 ಗ್ರಾಂ ತೂಕದ ಬಂಗಾರದ ಜುಮುಕಿ, 1 ಗ್ರಾಂ ತೂಕದ

ಬಂಗಾರದ ಪ್ಲೇಟ್, 3 ಗ್ರಾಂ ತೂಕದ ಸಣ್ಣ ಬಂಗಾರದ ಉಂಗುರಗಳನ್ನು ಕಳ್ಳತನ ಮಾಡಿಕೊಂಡು ಹೋಗಿದ್ದು, ಆದಕಾರಣ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 380 ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪದ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ ಃ ***29-12-2022***

ಸಹಿ

**(ಶಿವಕುಮಾರ್.ಆರ್.)**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.**